# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ, ವಿಜಯನಗರ ಉಪವಿಭಾಗ

## ವಾರ್ಡ್ ನಂ. 123 : ವಿಜಯನಗರ

ದಿನಾಂಕ: 16.07.2022 ರಂದು 11.00 ಗಂಟೆಗೆ ಶ್ರೀ.ಡಿ.ಕೆ ಬಾಬು ನೋಡಲ್ ಅಧಿಕಾರಿ, ವಾರ್ಡ್ ನಂ.123 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿಜಯನಗರ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು.

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ. ಡಿ.ಕೆ ಬಾಬು | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ. |
| 2. | ಶ್ರೀ.ಎಸ್.ಕೆ.ಹೇಮಂತ್ ಕುಮಾರ್ | ಸದಸ್ಯ ಕಾರ್ಯದರ್ಶಿ ವಾರ್ಡ್ ಸಂಖ್ಯೆ: 123. |
| 3. | ಶ್ರೀಮತಿ.ಸುಜಾತ | ಹಿರಿಯ ಆರೋಗ್ಯ ಪರಿವೀಕ್ಷಕರು. |
| 4. | ಶ್ರೀಮತಿ.ಸಪ್ನ | ಕಿರಿಯ ಆರೋಗ್ಯ ಪರಿವೀಕ್ಷಕರು. |
| 5. | ಶ್ರೀ.ಎಸ್.ಶಿವಣ್ಣ | ಎ.ಎಸ್.ಐ ಕಾನೂನು ಸುವ್ಯವಸ್ಥೆ ಪೋಲಿಸ್ ಠಾಣೆ |
| 6. | ಶ್ರೀ.ಕೃಷ್ಣ ಮೂರ್ತಿ | ತೋಟಗಾರಿಕೆ ಇಲಾಖೆ. |
| 7. | ಶ್ರೀಮತಿ.ಸರಸ್ವತಿ | L/W |
| 8. | ಶ್ರೀಮತಿ.ನಾಗರತ್ನಮ್ಮ | L/W |
| 9. | ಶ್ರೀ.ಕುಮಾರ್.ಆರ್. | SWM ಪರಿವೀಕ್ಷಕರು. |
| 10. | ಶ್ರೀ.ಟಿ.ಆರ್.ಶ್ರೀನಿವಾಸ್ | SWM ಪರಿವೀಕ್ಷಕರು. |
| 11. | ಶ್ರೀ.ಆರ್.ಎಸ್. ಪವನ್ | ಪಿ.ಸಿ–19758 |
| 12. | ಶ್ರೀ.ಸುಬ್ರಮಣಿ | SWM ಪರಿವೀಕ್ಷಕರು. |
| 13. | ಶ್ರೀಮತಿ.ಸುಮಿತ್ರ ಬಿ.ಎಸ್ | ಮೌಲ್ಯಮಾಪಕರು. |
| 14. | ಶ್ರೀ.ಲಿಂಗಯ್ಯ.ಎಂ | ಆರ್.ಐ |

### :ನಡಾವಳಿಯ ವರದಿ:

ಕಾರ್ಯದರ್ಶಿಗಳಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ನೋಡಲ್ ಅಧಿಕಾರಿಯವರಿಗೆ ಹಾಗೂ ಅಧಿಕಾರಿಗಳು ಮತ್ತು ನೌಕರರಿಗೆ ಸ್ವಾಗತ ಕೋರಿದರು.

1. ಮುಂದಿನ ಸಭೆಯಲ್ಲಿ ಆರೋಗ್ಯ ಅಧಿಕಾಯವರು ಮತ್ತು ಆಶಾ ಕಾರ್ಯಕರ್ತೆಯರನ್ನು ಮುಂದಿನ ಸಭೆಯಲ್ಲಿ ಹಾಜರಾಗುವಂತೆ, ನೋಡಲ್ ಅಧಿಕಾರಿ ರವರು ತಿಳಿಸಿದರು.
2. ವಾರ್ಡ್‌ನಲ್ಲಿ Spraying & Fogging ಕಾಮಗಾರಿಯನ್ನು ಸಮಪರ್ಕವಾಗಿ ಮಾಡುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು.
3. Plastic ನಿಷೇದದ ವಿಚಾರವಾಗಿ ಸಾರ್ವಜನಿಕರಿಗೆ ತಿಳುವಳಿಕೆ ನೀಡುವಂತೆ ಹಾಗೂ ದಂಢ ವಿಧಿಸುವಂತೆ ಹಿರಿಯ ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ನೋಡಲ್ ಅಧಿಕಾರಿ ರವರು ಸೂಚಿಸಿದರು.
4. Traffic Police, Welfare Department, BSWSB & Forest Department ಅಧಿಕಾರಿ ವರ್ಗದವರು ಮುಂದಿನ ಸಭೆಯಲ್ಲಿ ಹಾಜರಾಗುವಂತೆ, ನೋಡಲ್ ಅಧಿಕಾರಿ ರವರು ತಿಳಿಸಿದರು.
5. Marshal ಗಳು ಮುಂದಿನ ಸಭೆಯಲ್ಲಿ ಹಾಜರಾಗುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿ ರವರು ಸೂಚಿಸಿದರು.

6. SWM AEE ರವರನ್ನು ಮುಂದಿನ ಸಭೆಯಲ್ಲಿ ಹಾಜರಾಗುವಂತೆ ತಿಳಿಸಲು, ನೋಡಲ್ ಅಧಿಕಾರಿ ರವರು ತಿಳಿಸಿದರು.
7. ಕಂದಾಯ ಪಾವತಿಯನ್ನು ಅತಿ ಜರೂರಾಗಿ ನಿರ್ವಹಿಸುವಂತೆ ಕಂದಾಯ ನಿರೀಕ್ಷಕರರಿಗೆ ನೋಡಲ್ ಅಧಿಕಾರಿ ರವರು ಸೂಚಿಸಿದರು.
8. ಘನತ್ಯಾಜ್ಯ ನಿರ್ವಹಣೇ ಸಮರ್ಪಕವಾಗಿ ನಿರ್ವಹಿಸಲು ಅಧ್ಯಕ್ಷರು ಸೂಚಿಸಿದರು ಹಾಗೂ ಪ್ರತಿದಿನ ವಾರ್ಡ್‌ನಲ್ಲಿ ಕಸವಿಂಗಡನೆ-ಸಾಗಣೆ ಸಮರ್ಪಕವಾಗಿ ನಡೆಯುತ್ತಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು ಹಾಗೂ ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿಯನ್ನು ಸ್ವಚ್ಛಗೊಳಿಸಲು ಪಿ.ಕೆ ರವರನ್ನು ನೇಮಿಸಲು ನೋಡಲ್ ಅಧಿಕಾರಿ ರವರು ಕೋರಿದರು.
9. ಪ್ರತಿವಾರ Ganag work ನ್ನು ನಿರ್ವಹಿಸುತ್ತಿರುವುದಾಗಿ ಕಿರಿಯ ಆರೋಗ್ಯ ಅಧಿಕಾರಿ ರವರು ಸಭೆಗೆ ತಿಳಿಸಿದರು.
10. Link work ಗಳು ಪ್ರತಿದಿನ ವಾರ್ಡ್‌ನಲ್ಲಿ ಹಸಿ ಕಸ ಮತ್ತು ಒಣ ಕಸ ವಿಂಗಡನೆ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡುತ್ತಿರುವುದಾಗಿ ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

27/07/2022

ಸದಸ್ಯ ಕಾರ್ಯದರ್ಶಿ-ವಾರ್ಡ್ 123 ಹಾಗೂ
ಸಹಾಯಕ ಅಭಿಯಂತರರು,

(ಪಿ.ಕೆ ಬಾಬು)
ನೋಡಲ್ ಅಧಿಕಾರಿ ವಾರ್ಡ್-123

<u>ಪ್ರತಿಯನ್ನು:-</u>

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ವಿಜಯನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.123 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು ವಿದ್ಯುತ್ (ಬೀದಿ ದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ